589

ತುಮಕೂರು ಡಿಸ್ಟ್ರಿಕ್ಟು.

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

ತಾರೀಖು 23ನೆ ಮಾರ್ಚಿ 1904.

1. ಕಂದಾಯದ ಬಾಕೀದಾರರಾದ ತುರ್ವೆಕೆರೆ ಗ್ರಾಮದ ಜೋಡಿದಾರ್ ಗೋಪಾಲದೀಕ್ಷಿತರು ವಗ್ಗೈರಿಂದ ಬರಬೇಕಾದ ಜಮೀರ್ ಕಂದಾಯದ ಬಾಕೀಗಾಗಿ ಇದರಿಂ ನಮೂದಾಗುವ ಸ್ಥಿರಸ್ವತ್ತು ತುಮಕೂರು ಡಿಸ್ಟ್ರಿಕ್ಟು ತುರ್ವೆಕೆರೆ ಸಬ್ ತಾಲ್ಲೂಕು ಕಛೇರಿಯಲ್ಲಿ 23—5-1904ನೆ ತಾರೀಖಿನಲ್ಲಿ ಒಹಿರಂಗವಾಗಿ ಹರಾಜು ಮಾಡಲ್ಪಡುತ್ತದೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟಿದೆ.

ಹರಾಜು ಸದರಿ ತಾರೀಖು ದಿನ 11 ಘಂಟೆಗೆ ಉಪಕ್ರಮಿಸಲ್ಪಡತ್ತೆ. ಸ್ವತ್ತು ಏಕದಂ ಜಡದಾಖಲ್ ಸ್ವತ್ತಾದನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1902—1903ನೆ ಸಾಲಿಗೆ ಪೂರ್ತಿಯಾಗಿ * ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಿಂ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪ್ಸೀಲ್ ಮೇರಿಗೆ 52—11—6 ರೂಪಾಯಿ ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜುದಾರನು ಹರಾಜ್ ಮೊಬಲಗಿನ ಶೇಕಡಾ 25 ರೂಪಾಯಿಗಳನ್ನು ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕೀ ಮೊಬಲಗು ಹರಾಜು ತಾರೀಖು ಲಾಗಾಯಿತು 15 ದಿವಸಗಳೊಳ್ಳಿ ಪಾವತಿ ಮಾಡಲ್ಪಡಬೇಕು ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನು ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ಟು ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೇ ಹೋದಾಗ್ಯೆ ಸದರೀ ಸ್ವತ್ತು ಪೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ ಯಾ ವಿಜಂಟು ಯಾ ಮುತಾಲೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನ ತಿಳಿಸಬೇಕೆಂಕಲೂ, ಇತರರಿಗೋಸ್ಕರ ಮುತಾಲೀಕರಾಗಿ ಸವಾಲ್ ಮಾಡುವ ಸಂದರ್ಭದಲ್ಲಿ ಅಂಥಾ ತಮ್ಮ ಯಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನ ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕೀದಾರನಾಗಲೀ ಆತನ ತರಫ ನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲೀ ಬಾಕೀಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ, ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯೂಟಿ ಕಮಿಷನರವಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗರುಕೊಂಡವರು ಹರಾಜ್ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯೂಟಿ ಕಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟಕೂಡ್ಲೆ, ಹರಾಜುದಾರು ಸದರೀ ಸ್ವತ್ತಿನ ಸ್ವಾಧೀನವನ್ನ ಹೊಂದುವರು ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯೂಟಿ ಕಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಬಂದು ಹರಾಜ್ ಸರ್ಟಿಫಿಕೇಟಿ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯಾಗಲೀ ಯಾ ವಿಸ್ತೀರ್ಣದಲ್ಲಿಯಾಗಲೀ ಇರುವ ಸ್ವಾಲಿತ್ಯಗಳಿಗೆ ಗವರ್ನಮೆಂಟಿನವರು ಜವಾಬ್ದಾರರಲ್ಲವೆಂಬ ಅಂಶವನ್ನ ಸ್ಪಷ್ಟವಾಗಿ ಒಳಿದಿರತಕ್ಕದ್ದು.

9. ಹರಾಜಿನಿಂದ ತಮಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯಿತು 30 ದಿವಸಗಳೊಳ್ಳಿ ಡೆಪ್ಯೂಟಿ ಕಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಮಿಷನರಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ನಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು :—

ತಾಲ್ಲೂಕು. ಹೋಬಳಿ. ಗ್ರಾಮ.	ಬಾಕೀದಾರರ ಹೆಸರು.	ಸ್ವತ್ತಿನ ತಪ್ಸೀಲ್. ಕಟ್ಟಡಗಳು. ಕಟ್ಟಡದ ಹೆಸರು.	ಇಂದಾಜು ಕಿಮ್ಮತ್ತು.	ಜಮೀನು. ನಂಬರ್ ಅಥವಾ ಜಮೀನಿನ ಹೆಸರು ಮುಸ್ಕಿ, ತರೀ ಅಥವಾ ನಾ ಬಾಗಾಯತು.	ವಿಸ್ತೀರ್ಣ.	ಅಕಾರ.	ಸರ್ಕಾರಕ್ಕೆ ಬರಬೇಕಾದ ನೋಟಸ್ ಫೀ ವಗ್ಗೈರೆ ಸಹಿತವಾದ ಬಾಕಿ ಮೊಬಲಗು.	
ತುರ್ವೆಕೆರೆ ಸಬ್ ತಾಲ್ಲೂಕು. ತುರ್ವೆಕೆರೆ. ಜೋಡಿ ಅರಸಿನದಹಳ್ಳಿ. 1. ಗೋಪಾಲದೀಕ್ಷಿತರು. 2. ಭೋಗೇಶ್ವರಯ್ಯ ದೀಕ್ಷಿತರು. 3. ಕೃಷ್ಣದೀಕ್ಷಿತರು. 4. ನಂಜುಂಡಿ.	...	ರೂ. ಆ. ಪೈ. ...	ಬೈಪಲ್ಲಿ ಪಿಟಿ ನಂ. 10-502	ಮುಸ್ಕಿ ತರಿ ಬಾಗಾಯತು ಪರಂಪೋಕು	ಖ. ಕೊ. ಪ. 10 2 15 2 1 0 1 9 6 1 7 0	ರೂ. 150	ಆ. ಪೈ. 0 0	ರೂ. ಆ. ಪೈ. 51 11 6 1 0 0 52 11 6	ನೋಟಸ್ ಫೀ

ಹದ್ದುಬಂದಿ.
ಪೂರ್ವಕ್ಕೆ — ಮಾದಿಹಳ್ಳಿ ಗ್ರಾಮ
ಪಶ್ಚಿಮಕ್ಕೆ — ತುರ್ವೆಕೆರೆ ಅವಾನಿಕೆರೆ ಗ್ರಾಮದ ಎಲ್ಲೆ
ಉತ್ತರಕ್ಕೆ — ಡಿಟ್ಟೋ
ದಕ್ಷಿಣಕ್ಕೆ — ಅರಳಿಕೆರೆ ಮಾದಿಹಳ್ಳಿ ಗ್ರಾಮ

* ಯಾ ಬಾಕಿ ಇರುವ ಮಟ್ಟಿಗೆ ಸಂದರ್ಭಾನುಸಾರ ನಮೂದಿಸತಕ್ಕದ್ದು.

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ಪ ಪ್ರಸಿದ್ಧಪತ್ರಿಕೆ.

ತಾರೀಖು 23ನೆ ಮಾರ್ಚ್ 1904.

1. ಕೆಂದಾಸಾದ ಬಾಕೀದಾರರಾದ ಮದ್ದಗಿರಿಯಲ್ಲಿ ಇರುವ ಶಾಮಾಚಾರ್ ಮತ್ತು ಕೃಷ್ಣಮಾಚಾರ್ ಹಿಸ್ಸೆ ಭೋಗ್ಯದಾರ್ ಮೈಸೂರಲ್ಲಿರುವ ರಿಚಪ್ಪರ ಜೆಂಡತಿ ರಂಗನಾಯಕಮ್ಮನಿಂದ ಬರಬೇಕಾದ ಜಮೀನ್ ಕೆಂದಾಸುದ ಬಾಕೀಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತು ತುಮಕೂರು ಡಿಸ್ಟ್ರಿಕ್ಟು ಮದ್ದೂರಿ ತಾಲ್ಲೂಕು ಕಛೇರಿಯ ರೂಬರೂಬ್ 23—5—1904ನೆ ತಾರೀಖಿನಲ್ಲಿ ಬಹಿರಂಗವಾದ ಹರಾಜು ನೋಡಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟು ಇದೆ.

ಹರಾಜು ಸದರಿ ತಾರೀಖಿನ ದಿವಿ 11 ಘೆಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕಪಂ ಚತದರಖಾಸ್ತು ದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಕರಾಜುದಾರನು 1903ನೆ ಸಾಲಿಗೆ ಪೂರ್ತಿಯಾಗಿ * ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಲ್ಲಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಖ್ತೆಲೆ ವೇಗ 48—11—9 ರೂಪಾಯಿ ಆಗಿರುತ್ತೆ.

3. ಕರಾಜು ಕಾಲದಲ್ಲಿ ಪರಾಜುದಾರನು ಕರಾಜಿ ನೊಲಗಿನ ಶೇಕಡಾ 25 ರೂಪಾಯಿಗಳನ್ನ ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಅದು ಜಾಲಾ ಕರಾಜು ಬಾಬತು ಬಾಕೀ ಮೊಬಲಗು ಹರಾಜು ತಾರೀಖು ಲಾಗಾಯತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇ ಪ ಡಿಪಾಜಿಟ್ಟು ಮೊಬಲಗನ್ನು ಸಾರ್ವಜನ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ಟು ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕೀ ಮೊಬಲಗು ಪಾವತಿ ಮಾಡಲ್ಪಡದೇ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗ್ಯಾರಂಡಿನಿಯೂ ಪೂರ್ತಿ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಮುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ ಯಾ ಏಜಂಟು ಯಾ ಮುತಾಲೀದಾರರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನ ತಿಳಿಸಬೇಕಾಂತಲೂ, ಇತರರಿಗೋಸ್ಕರ ಮುತಾಲೀಕರಾಗಿ ಸವಾಲ್ ಮಾಡುವ ಜನಗಳಲ್ಲಿ ಅಂಥಾ ತಮ್ಮ ಏಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನ ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗೂ ನಿಲ್ಲಿಸಲ್ಪಡುವದಕ್ಕೆ ಮುಂಚೆವಾಗಿ ಬಾಕೀದಾರನಾಗಲೀ ಆತನ ತರಫಿನವನಾಗಿ ಪ್ರತಿನಿಧಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಜೇಳುವ ಯಾವ ಇತರ ಮನುಷ್ಯನೇ ಆಗಲೀ ಬಾಕಿಯಲ್ಲಿ ಬಿದಿರುವ ಪೂರಾ ಕಂದಾಯದ ಹಣವನ್ನೂ, ಬಡ್ಡಿ ಮತ್ತು ಇತರ ವಿಚ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯೂಟಿ ಕಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತಗದುಕೊಂಡವರು ಹರಾಜ್ ಮೊಬಲಗನ್ನು ಪೂರ್ತಿದಾಗಿ ಪಾವತಿ ಮಾಡಿದಮೇಲೆ ಡೆಪ್ಯೂಟಿ ಕಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡ್ಲೆ ಹರಾಜುದಾರು ಸದರೀ ಸ್ವತ್ತಿನ ಸ್ವಾಧೀನವನ್ನ ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಜಿಸ್ಟರ್ ಮಾಡಲ್ಪಟ್ಟು ಡೆಪ್ಯೂಟಿ ಕಮಿಷನರವರಿಂದ ಸೈನ್ ಮೊಹರ್ ಮಾಡಲ್ಪಟ್ಟ ಒಂದು ಹರಾಜ್ ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯಾಗಲಿ ಯಾ ವಿಸ್ತೀರ್ಣದಲ್ಲಿಯಾಗಲಿ ಇರುವ ಸ್ವಲ್ಪ ನ್ಯೂನತ್ಯಗಳಿಗೆ ಗವರ್ನಮೆಂಟಿನವರು ಜವಾಬ್ದಾರ್ರಲ್ಲವೆಂಬ ಅಂಶವನ್ನ ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯತು 30 ದಿವಸಗಳಲ್ಲಿ ಡೆಪ್ಯೂಟಿ ಕಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾರ್ಣೂನಿಂದ ವಿಧಿಸಲ್ಪಟ್ಟ ಪೀಯಿದೆಯಲ್ಲಿ ಗವರ್ನಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು :—

ತಾಲ್ಲೂಕು.	ಹೋಬಳಿ.	ಗ್ರಾಮ.	ಬಾಬ್ತುದಾರರ ಹೆಸರು. ಕಟ್ಟಡದ ಹೆಸರು.	ಸ್ವತ್ತಿನ ತಪ್ಪೀಲ್. ಕಟ್ಟಡಗಳು. ಅಂದಾಜು ಕಿಮ್ಮತ್ತು.	ಜಮೀನು. ನಂಬರ್ ಉಪಹಾ ಜಮೀನಿನ ಹೆಸರು.	ಮಿಷ್ಕಿ ಜರೀ ಅಥವಾ ಬಾಗಾಯತು	ವಿಸ್ತೀರ್ಣ.	ಲಕ್ಷಾರ.	ಸರ್ಕಾರಕ್ಕೆ ಬರಬೇಕಾದ ಕಂದಾಯ ಮತ್ತು ಸೆಸ್ ಫೀ ಮತ್ತಿತರ ಸಹಿತವಾದ ಬಾಕೀ ಮೊಬಲಗು.	
				ರೂ. ಆ. ಪೈ.			ಎ. ಗು.	ರೂ. ಆ. ಪೈ.	ರೂ. ಆ. ಪೈ.	
ಮದ್ದೂರಿ	ಬಿದರಹಳ್ಳಿ	ಕೆಸ್ತೂರು	... ...		ಸರ್ವೆ ನಂ. 1	ಪರಂಬೋಕು	20	35	3 0 0	47 6 9
						ಖುಷ್ಕಿ	182	10	65 12 0	0 8 0
						ಬಾಗಾಯತು	0	21	2 0 0	1 0 0
						ಜಮ್ಮಾ ...	302	6	70 12 0	48 14 9

ನೋಟೀಸ್ ಫೀ
ಜಪ್ತಿ ಇಸ್ತಿಹಾರ್ ಫೀ

* ಯಾವ ಬಾಕಿ ಇರುವ ಮಟ್ಟಿಗೆ ಸಂದರ್ಭಾನುಸಾರ ನಮೂದಿಸತಕ್ಕದ್ದು.

ಬಿ. ಭೀಮರಾವ್, ಪಾರ್ ಡೆಪ್ಯೂಟಿ ಕಮಿಷನರ್.

ಕಡೂರು ಡಿಸ್ಟ್ರಿಕ್ಟ್.

ಇಸ್ತಿಹಾರ್‌ನಾಮೆ.

ಸ್ರ 1904ನೆ ಇಸವಿ ಮಾರ್ಚ್ ತಾರೀಖು 31.

1. ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ :—1904ನೆ ಇಸವಿ ಜುಲೈ ಗುರ್ಜಿ ಲಾಗಾಯತು 1906ನೆ ಇಸವಿ ಜೂನ್ ಆಖೈರು ವರಿಗೆ 2 ವರುಷಗಳಿಗೆ ಕಡೂರು ಡಿಸ್ಟ್ರಿಕ್ಟಿನಲ್ಲಿನ ಮೂಡಿಗೆರೆ ತಾಲ್ಲೂಕು ಕೊಪ್ಪುಗೆಹಾರ್ (ಬೂಂದಾಫಾಪೆ) ಟೋಲ್ ಗೇಟಿನಲ್ಲಿ ಟೋಲ್ ಯಾನೆ ಸುಂಕವನ್ನು ವಸೂಲ್ಮಾಡುವ ಬಾಬನ್ನು ಡಿಪ್ಯೂಟಿ ಕಮಿಷನರ್ ಯಾ ಅವರಿಂದ ಈ ಕೆಲಸಕ್ಕೆ ನೇಮಿಸಲ್ಪಟ್ಟ ಅಸಿಸ್ಟೆಂಟ್ ಕಮಿಷನರವರಿಂದ ಮೂಡಿಗೆರೆ ತಾಲ್ಲೂಕು ಕಚೇರಿಯಲ್ಲಿ 1904ನೆ ಮೇ ತಾರೀಖು 16ರಲ್ಲಿ ಬಹಿರಂಗವಾಗಿ ಹರಾಜು ಮಾಡಲ್ಪಡುತ್ತೆ.

2. ಎಲ್ಲಾ ಸವಾಲುಗಳಿಗಿಂತಲೂ ಜಾಸ್ತಿಯಾದ ಛಡ ದರಖಾಸ್ತು ಸರಿಯಾಗಿ ಕಂಡುಬಂದಲ್ಲಿ ಗವರ್ನಮೆಂಟ್ ಮಂಜೂರಿಗೆ ಒಳಪಟ್ಟು ಡಿಪ್ಯೂಟಿ ಕಮಿಷನರ್ ಸಾಹೇಬರವರಿಂದ ಅಂಗೀಕರಿಸಲ್ಪಡುತ್ತೆ. ಛಡ ದರಖಾಸ್ತನ್ನಾಗಲಿ ಯಾವ ಇತರ ದರಖಾಸ್ತನ್ನಾಗಲಿ ಯಾವ ಸಬಬನ್ನು ತಿಳಿಸದೇನೆ ಅಂಗೀಕರಿಸುವುದಕ್ಕೆ ಯಾ ತಿರಸ್ಕರಿಸುವುದಕ್ಕೆ ಡಿಪ್ಯೂಟಿ ಕಮಿಷನರ್‌ರವರು ಅಧಿಕಾರ ಉಳಿಸಿಕೊಂಡಿರುತ್ತಾರೆ.

3. ಛಡ ದರಖಾಸ್ತುದಾರನು ಹರಾಜು ಆದ ಕೂಡ್ಲೆ ಹರಾಜು ಮೊಬಲಗು ಪೈಕಿ ಮೂರನೇ ಬಂದು ಅಂಶದ ಮೊಬಲಗನ್ನು ನಗದಾಗಿ ಅಥವಾ ಡಿಪ್ಯೂಟಿ ಕಮಿಷನರವರಿಗೆ ಪಾವತಿ ಮಾಡಬಹುದೆಂಬ ಪರಾ ಬರಿಯಲ್ಪಟ್ಟ ಗವರ್ನಮೆಂಟ್ ಆಫ್ ಇಂಡಿಯಾ ಪ್ರೋನೋಟು ಮೂಲಕವಾಗಿ ಡಿಪಾಜಿಟ್ಟು ಇಡಬೇಕು. ಹಾಗೂ ರೂಪಾಯಿ ಒಂದರ ಬಂದಾಣೆಯಂತೆ ಆ ಮೊಬಲಗಿನ ಮೇಲೆ ಆಗುವ ಲೋಕಲ್ ಸೆಸ್ಸು ಸಹಾ ಕೊಡಬೇಕು. ಗವರ್ನಮೆಂಟಿನಿಂದ ಹರಾಜು ಮಂಜೂರಾಗಿ ಬಂದಕೂಡಲೆ ಬಾಕಿ ಮೊಬಲಗನ್ನು ಲೋಕಲ್ ಸೆಸ್ಸಿನಿಂದ ಸದರಿ ಟೋಲ್ ಗೇಟು ಯಾವ ತಾಲ್ಲೂಕಿನಲ್ಲಿದ್ದೆಯೋ ಆ ತಾಲ್ಲೂಕು ಖಜಾನೆಗೆ 1904ನೆ ಇಸವಿ ಆಗಸ್ಟು ತಾರೀಖು 16ರ ಲಾಗಾಯಿತು ಸಮನಾದ ಎಂಟು ಖಿಸ್ತುಗಳಾಗಿ ಪ್ರತಿ ತಿಂಗಳು 10ನೆ ತಾರೀಖಿಗೆ ಪಾವತಿ ಮಾಡಬೇಕು. ಡಿಪಾಜಿಟ್ಟಿನ ಮೊಬಲಗು 9, 10, 11 ಮತ್ತು 12ನೆ ಖಿಸ್ತುಗಳಿಗೆ ಜಮಾ ಮಾಡಿಕೊಳ್ಳಲ್ಪಡುತ್ತೆ. ದರಖಾಸ್ತುದಾರನು ಮಾಹೆವಾರು ಖಿಸ್ತು ಮೊಬಲಗನ್ನು ತಪ್ಪದೆ ಕೊಡುತ್ತಾ ಬರುವದಕ್ಕೆ ಇಬ್ಬರನ್ನು ಜಾಮೀನ್ ಕೊಡಬೇಕು. ಮತ್ತು ಹರಾಜು ಮಂಜೂರಿ ಸಂಗತಿ ತಿಳಿದ ತಾರೀಖು ಲಾಗಾಯಿತು ಮೂರು ದಿವಸದೊಳಗೆ ಅವಶ್ಯಕವಿರುವ ಕರಾರನ್ನು ಛಾಪಾ ಕಾಗದದಲ್ಲಿ ಬರೆದು ಕೊಡಬೇಕು. ಕೇವಣಿ ಇಡದೆ ಇದ್ದರೆ ಅಥವಾ ಜಾಮೀನ್ ಕೊಡದೆ ಇದ್ದರೆ ಡಿಪಾಜಿಟ್ ಮೊಬಲಗು ದಂಡವಾಗಿ ಸರ್ಕಾರಕ್ಕೆ ಶೇರಿಸಿಕೊಳ್ಳಲ್ಪಡುತ್ತೆ. ಮತ್ತು ಸದರಿ ಕಂಟ್ರಾಕ್ಟು ಎರಡನೇ ಹರಾಜು ಮಾಡಲ್ಪಡುವುದು. ಹೀಗೆ ಮಾಡಿದ್ದರಲ್ಲಿ ಸರ್ಕಾರಕ್ಕೆ ಲುಕ್ಸಾನು ಸಂಭವಿಸಿದಲ್ಲಿ ಕಂಟ್ರಾಕ್ಟುದಾರನ ಅಥವಾ ಅವನ ಜಾಮೀನ್‌ದಾರರ ಜಿಂದಿಗೆ ಹರಾಜು ಮಾಡಿಸಿ ವಸೂಲ್ಮಾಡಿಕೊಳ್ಳಲ್ಪಡುತ್ತೆ.

4. ಪ್ರತಿ ಮಾಹೆಯಲ್ಲಿಯೂ ಕೊಡತಕ್ಕ ಖಿಸ್ತು ಮೊಬಲಗನ್ನು ಗೊತ್ತು ಮಾಡಲ್ಪಟ್ಟ ತಾರೀಖಿನೊಳಗಾಗಿ ಪಾವತಿ ಮಾಡಲು ತಪ್ಪಿದರೆ ವರುಷ ಬಂದಕ್ಕೆ ಕೇಕಡ ಆರು ರೂಪಾಯಿ ಮೇರೆ ಬಡ್ಡಿ ಸೇರಿಸಿ ಖಿಸ್ತು ಮೊಬಲಗು ವಸೂಲ್ಮಾಡಲ್ಪಡುತ್ತೆ.

5. ಕಂಟ್ರಾಕ್ಟರು ಹರಾಜಿನಲ್ಲಿ ಪಡಿಯುವ ಮೊಬಲಗಿನ ಮೇಲೆ ರೂಪಾಯಿ ಬಂದಕ್ಕೆ ಬಂದಾಣೆಯಂತೆ ಲೋಕಲ್ ಸೆಸ್ಸು ಕೊಡಲಿಕ್ಕೆ ಬದ್ಧನಾಗಿರುತ್ತಾನೆ

6. ಕಂಟ್ರಾಕ್ಟರಿಂದ ಯಾ ಅವನ ಜಾಮೀನ್‌ದಾರ್‌ರಿಂದ ಬಾಕಿ ಮೊಬಲಗು ಬಾರದೆ ಇದ್ದಲ್ಲಿ ಲ್ಯಾಂಡ್ ರೆವಿನ್ಯೂ ಬಾಕಿ ವಸೂಲಿಗೆ ಹಾಲಿ ಜಾರಿಯಲ್ಲಿರುವ ನಿಬಂಧನೆ ಅನುಸರಿಸಿ ವಸೂಲ್ಮಾಡಲ್ಪಡುತ್ತೆ.

7. ಪ್ರತಿ ದಿವಸದ ಟೋಲ್ ವಸೂಲಿ ತೋರಿಸುವ ಲೆಖ್ಖವನ್ನು ಇಡಲು ಕಂಟ್ರಾಕ್ಟುದಾರನು ಬದ್ಧನಾಗಿರುವುದಲ್ಲದೆ ಸದರಿ ಲೆಖ್ಖವು ಡಿಪ್ಯೂಟಿ ಕಮಿಷನರ್ ಅಸಿಸ್ಟೆಂಟ್ ಕಮಿಷನರ್ ಮತ್ತು ಸದರಿ ಟೋಲು ಯಾವ ತಾಲ್ಲೂಕು ಅಥವಾ ಸಬ್ ತಾಲ್ಲೂಕಿನಲ್ಲಿ ಧೆಯೋ ಆಯಾ ತಾಲ್ಲೂಕು ಅಮಲ್ದಾರ್ರು ಅಥವಾ ಸಬ್ ತಾಲ್ಲೂಕು ಡಿಪ್ಯೂಟಿ ಅಮಲ್ದಾರ್‌ರ ತನಿಖೆಗೆ ಒಳಗಾಗಿರತಕ್ಕದ್ದು.

8. ಕಂಟ್ರಾಕ್ಟರು ಇದರಡಿ ಕಾಣಿಸಿರುವ ಷೆಡ್ಯೂಲ್‌ನಲ್ಲಿ ಕಂಡ ದರಗಳ ಪ್ರಕಾರವಲ್ಲದೆ ಅನ್ಯಥಾ ಟೋಲು ಸುಂಕವನ್ನು ವಸೂಲ್ಮಾಡಕೂಡದು. ಹಾಗೆ ಮಾಡಿದ್ದುದರೆ ಕಂಟ್ರಾಕ್ಟನ್ನು ರದ್ದು ಮಾಡುವುದಲ್ಲದೆ ಕಂಟ್ರಾಕ್ಟುದಾರನನ್ನು ಕ್ರಿಮಿನಲ್ ತಪ್ಪು ಪಾಸಿಕ್ಯೂಷನ್‌ಗೆ ಗುರಿಪಡಿಸುತ್ತೆ.

9. ದಂಡು—ಮಿಲಿಟರಿ ಸಾಮಾನು ಅಥವಾ ಸರ್ಕಾರಿ ಡ್ಯೂಟಿಮೇಲೆ ಪ್ರಯಾಣ ಮಾಡುವ ಪೋಲೀಸು ಯಾ ಇತರ ಉದ್ಯೋಗಸ್ಥರ ಸರ್ಕಾರದ ಸಾಮಾನುಗಳು ಅಂದರೆ ಸಮ್ಮಂಧಪಟ್ಟ ಇಲಾಖಾ ಮೊಖ್ತೇಸರರ ಸರಟಿಫಿಕೇಟಿನಿಸಿ ಬರತಕ್ಕ ಸಾಮಾನುಗಳು ಇವುಗಳ ಮೇಲೆ ಕಂಟ್ರಾಕ್ಟುದಾರನು ಸುಂಕ ವಸೂಲ್ಮಾಡಕೂಡದು.

10. ಕಂಟ್ರಾಕ್ಟುದಾರನು ಸುಂಕ ವಸೂಲ್ಮಾಡುವ ಬಂದು ದರವಾರು ಪಟ್ಟಿಯನ್ನು ಇಂಗ್ಲೀಷ್ ಮತ್ತು ಕನ್ನಡದಲ್ಲಿ ಸ್ಪಷ್ಟವಾಗಿ ಬರೆದು ಟೋಲ್ ಗೇಟು ಬಳಿ ಹನ್ನಾಗಿ ಕಾಣುವ ಜಾಗದಲ್ಲಿ ತಗಲುಹಾಕಬೇಕು.

11. ಗವರ್ನಮೆಂಟಿನಿಂದ ನೇಮಿಸಲ್ಪಟ್ಟ ಟೋಲ್ ಗೇಟು ಬಳಿಯಲ್ಲಲ್ಲದೆ ಮತ್ತೆಲ್ಲಿಯೂ ಕಂಟ್ರಾಕ್ಟುದಾರನು ಸುಂಕವನ್ನು ವಸೂಲ್ಮಾಡಕೂಡದು.

12. ಇನ್ನು ಜಾಸ್ತಿ ಅಂಶವೇನಾದರೂ ತಿಳಿಯಬೇಕಾಗಿದ್ದಲ್ಲಿ ಕಡೂರು ಡಿಸ್ಟ್ರಿಕ್ಟ್ ಡೆಪ್ಯೂಟಿ ಕಮಿಷನರ್ ಸಾಹೇಬರವರಿಗೆ ಬರೆಯುವದರ ಮೂಲಕ ತಿಳಿದುಕೊಳ್ಳಬಹುದು.

ಕಂಪ್ಟಿಗೆಸಾರು ಟೋಲಗೇಟು ಮೇಲೆ ವಸೂಲು ಮಾಡತಕ್ಕಾದ ದರಗಳ ಪಟ್ಟಿ.

ನಂಬರು.	ವಿವರ.	ರೂ.	ಆ.	ಪೈ.
1	ಪ್ರತಿ ನಾಲ್ಕು ಚಕ್ರದ ಭಂಡಿಗೆ	2	0	0
2	ಪ್ರತಿ ಎಡ್ಡು ಡಿಟೋ	1	0	0
3	ಪ್ರತಿ ಯಕ್ಕಾ ಮೇಲೂ	0	4	0
4	ಸ್ಪ್ರಿಂಗ್ ಯಾನೆ ಬಿಲ್ಲಿನಮೇಲೆ ಇರುವ ಬಾಡಿಗೆ ಭಂಡಿ ಪ್ರತಿ 1ಕ್ಕೆ ..	0	2	0
5	ಎಂಟು ಎತ್ತುಗಳಿಂದ ಯಾ ಕೋಣಗಳಿಂದ, ಕುದುರೆಗಳಿಂದ, ಟಾಕಣಗಳಿಂದ, ಕತ್ತೆಗಳಿಂದ ಯಾ ಹೇಸರುಕತ್ತೆಗಳಿಂದ ಯಿಳಿಯಲ್ಪಡುವ ಬಿಲ್ಲಿನ ಮೇಲೆ ಇಲ್ಲದ ಪ್ರತಿ ಗಾಡಿ ವ ಬಾಡಿಗೆ ಭಂಡಿ 1ಕ್ಕೆ ಭರ್ತಿಯಾಗಿದ್ದರೆ.	1	8	0
6	ಡಿಟೋ ಡಿಟೋ ಭರ್ತಿಇಲ್ಲದಿದ್ದರೆ	0	8	0
7	ಆರು ಎತ್ತುಗಳು ವಗೈರೆಗಳಿಂದ ಯಿಳಿಯಲ್ಪಟ್ಟ ಗಾಡಿ ವ ಬಾಡಿಗೆ ಭಂಡಿ 1ಕ್ಕೆ ಭರ್ತಿ ಆಗಿದ್ದರೆ ...	0	12	0
8	ಡಿಟೋ ಡಿಟೋ ಭರ್ತಿ ಇಲ್ಲದಿದ್ದರೆ	0	6	0
9	ನಾಲ್ಕು ಎತ್ತುಗಳಿಂದ, ಕೋಣಗಳಿಂದ, ಕುದುರೆಗಳಿಂದ, ಟಾಕಣಗಳಿಂದ, ಹೇಸರುಕತ್ತೆಗಳಿಂದ ಯಿಳಿಯಲ್ಪಟ್ಟ ಗಾಡಿ ಮತ್ತು ಬಾಡಿಗೆ ಭಂಡಿ 1ಕ್ಕೆ ಭರ್ತಿಯಾಗಿದ್ದರೆ.	0	8	0
10	ಡಿಟೋ ಡಿಟೋ ಭರ್ತಿ ಇಲ್ಲದಿದ್ದರೆ	0	4	0
11	2 ಎತ್ತುಗಳು ವಗೈರೆಯಿಂದ ಯಿಳಿಯಲ್ಪಟ್ಟ ಗಾಡಿ ಯಾ ಬಾಡಿಗೆ ಭಂಡಿ 1ಕ್ಕೆ ಭರ್ತಿಯಾಗಿದ್ದರೆ .	0	4	0
12	ಡಿಟೋ ಡಿಟೋ ಇಲ್ಲದಿದ್ದರೆ	0	2	0
13	ಕೋಣಗಳು ಯಾ ಎತ್ತುಗಳು ರಾಸು 1ಕ್ಕೆ ಹೊರೆ ಹೊರಿಸಲ್ಪಟ್ಟಿದ್ದರೆ	0	1	0
14	ಡಿಟೋ ಡಿಟೋ ಹೊರೆ ಇಲ್ಲದಿದ್ದರೆ	0	0	3
15	ಪ್ರತಿ ಆನೆಗೂ	1	8	0
16	ಪ್ರತಿ ಒಂಟೆಗೂ ಹೊರೆ ಹೊರಿಸಲ್ಪಟ್ಟಿದ್ದರೆ	0	8	0
17	ಡಿಟೋ ಹೊರೆ ಇಲ್ಲದೆ ಇದ್ದರೆ	0	4	0
18	ಪ್ರತಿ ಕುದುರೆಗೂ ಹೊರೆ ಹೊರಿಸಲ್ಪಟ್ಟಿದ್ದರೆ ಯಾ ಸವಾರಿ ಮಾಡಲ್ಪಡುತ್ತಿದ್ದರೆ .	0	1	6
19	ಹೊರೆ ಇಲ್ಲದ ಯಾ ಹಿಡಿದುಕೊಂಡು ಹೋಗುವ ಪ್ರತಿ ಕುದುರೆಗೂ ...	0	0	9
20	ಪ್ರತಿ ತಟ್ಟು ಯಾ ಹೇಸರುಕತ್ತೆಗೂ ಹೊರೆ ಹೊರಿಸಲ್ಪಟ್ಟಿದ್ದರೆ ಯಾ ಸವಾರಿ ಮಾಡಲ್ಪಡುತ್ತಿದ್ದರೆ	0	0	9
21	ಡಿಟೋ ಹೊರೆ ಇಲ್ಲದ ಯಾ ಹಿಡಿದುಕೊಂಡು ಹೋಗಲ್ಪಡುವದಕ್ಕೆ ...	0	0	6
22	ಪ್ರತಿ ಕತ್ತೆಗೂ ಹೊರೆ ಹೊರಿಸಲ್ಪಟ್ಟಿದ್ದರೆ ಯಾ ಸವಾರಿ ಮಾಡಲ್ಪಡುತ್ತಿದ್ದರೆ ..	0	0	6
23	ಹೊರೆ ಇಲ್ಲದ ಯಾ ಹಿಡಿದುಕೊಂಡು ಹೋಗಲ್ಪಡುವ ಪ್ರತಿ ಕತ್ತೆ	0	0	1
24	ಪ್ರತಿ ಕಾಗ, ಮೇಕ, ಯಾ ಹಂದಿಗೂ	0	0	1
25	ಎಂಟು ಜೋಯಿಗಳೊಡನೆ ಪ್ರತಿ ಡೋಲಿ, ಪಾಲಕಿ ಯಾ ಟಾಂಜಾನಿಗೂ	1	0	0
26	ಆರು ಜೋಯಿಗಳೊಡನೆ ಪ್ರತಿ ಡೋಲಿ, ಪಾಲಕಿ, ಯಾ ಟಾಂಜಾನಿಗೂ	0	12	0
27	ನಾಲ್ಕು ಜೋಯಿಗಳೊಡನೆ ಡಿಟೋ . .	0	8	0
28	ಇಬ್ಬರು ಜೋಯಿಗಳೊಡನೆ ಡಿಟೋ	0	4	0

ನೋಟು :—ನಡೆದು ಬರುವ ಮೂರ್ಗಸ್ಥರ ಮೇಲೆ ಟೋಲ್ ಸುಂಕ ವಸೂಲ್ ಮಾಡತಕ್ಕದ್ದಲ್ಲಾ.

ಸ್ರ 1904ನೆ ಇಸವಿ ಮಾರ್ಚ್ ತಾರೀಖು 31.

1. ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ, 1904ನೆ ಇಸವಿ ಜುಲೈ ಗುರ್ರೆ ಲಾಗಾಯಿತು 1905ನೆ ಇಸವಿ ಜೂ ಆಖೈರು ವರೆಗೆ, 1 ವರುಷಕ್ಕೆ, ಕಡೂರು ಡಿಸ್ಟ್ರಿಕ್ಟಿನಲ್ಲಿನ ಇವರಡಿ ಕಾಣಿಸುವ ಟೋಲ್‌ಗೇಟುಗಳಲ್ಲಿ ಟೋಲ್‌ಯಾನೆ ಸುಂಕವನ್ನು ವಸೂಲು ಮಾಡುವ ಬಾಬನ್ನು ಡೆಪ್ಯುಟಿ ಕಮಿಷನರ್ ಯಾ ಅವರಿಂದ ಈ ಕೆಲಸಕ್ಕೆ ನೇಮಿಸಲ್ಪಟ್ಟ ಅಸಿಸ್ಟೆಂಟ್ ಕಮಿಷನರ ವರಿಂದ ಬಹಿರಂಗವಾಗಿ ಹರಾಜು ಮಾಡಲ್ಪಡುತ್ತೆ :—

ನಂಬರ್.	ಟೋಲುಗೇಟು ಹೆಸರು.	ಹರಾಜು ತಾರೀಖು.	ಹರಾಜು ನಡೆಯುವ ಸ್ಥಳ.
1	ಬಾಳೆಹೊನ್ನೂರು (ಭದ್ರಾನದಿ ಸೇತುವೆ) .	28ನೆ ಮೇ 1904	ಬಾಳೆಹೊನ್ನೂರು ಮುಸಾಫರ ಬಂಗಲೆಯಲ್ಲಿ
2	ತಡಸ (ಭದ್ರಾನದಿ ಸೇತುವೆ) ...	23 ಡಿಟೋ	ಎಡೆಹಳ್ಳಿ ಸಬ್ ತಾಲ್ಲೂಕು ಕಛೇರಿಯಲ್ಲಿ
3	ಹರಿಹರಪುರ (ತುಂಗಾನದಿ ಸೇತುವೆ) ...	25 ಡಿಟೋ	ಕೊಪ್ಪದ ತಾಲ್ಲೂಕು ಕಛೇರಿಯಲ್ಲಿ

2. ಎಲ್ಲಾ ಸವಾಲುಗಳಿಗಿಂತಲೂ ಜಾಸ್ತಿಯಾದ ಛಡ ದರಖಾಸ್ತು ಸರಿಯಾಗಿ ಕಂಡುಬಂದಲ್ಲಿ ಗೌರ್ನಮೆಂಟ್ ಮಂಜೂರಿಗೆ ಬಳಪಟ್ಟು ಡೆಪ್ಯುಟಿ ಕಮಿಷನರ್ ಸಾಹೇಬರವರಿಂದ ಅಂಗೀಕರಿಸಲ್ಪಡುತ್ತೆ. ಛಡ ದರಖಾಸ್ತನ್ನಾಗಲಿ ಯಾ ಇತರ ದರಖಾಸ್ತನ್ನಾಗಲಿ ಯಾವ ಸಬಬನ್ನೂ ತಿಳಿಸದೆ ನೆ ಅಂಗೀಕರಿಸುವದಕ್ಕೆ ಯಾ ತಿರಸ್ಕರಿಸುವದಕ್ಕೆ ಡೆಪ್ಯುಟಿ ಕಮಿಷನರವರು ಅಧಿಕಾರ ಉಳಿಸಿಕೊಂಡಿರುತ್ತಾರೆ.

3. ಛಡೆ ದರಖಾಸ್ತುದಾರನು ಹರಾಜಾದ ಕೂಡಲೆ ಹರಾಜು ಮೊಬಲಗಿನ ಪೈಕಿ ಮೂರನೇ ಒಂದು ಅಂಕದ ಮೊಬಲಗನ್ನು ನಗದಾಗಿ ಅಥವಾ ಡೆಪ್ಯೂಟಿ ಕಮಿಷನರವರಿಗೆ ಪಾವತಿ ಮಾಡಬಹುದೆಂಬ ಷರಾ ಬರಿಯಲ್ಪಟ್ಟ ಗವರ್ನ್‌ಮೆಂಟ್ ಆಫ್ ಇಂಡಿಯಾ ಪ್ರೊಮಿಸರಿ ನೋಟು ಮೂಲಕವಾಗಿ ಡಿಪಾಜಿಟ್ಟು ಇಡಬೇಕು. ಹಾಗೂ ರೂಪಾಯಿ ಬಂದರ ಬಂದಾಣಿಯಂತೆ ಆ ಮೊಬಲಗಿನ ಮೇಲೆ ಆಗುವ ಲೋಕಲ್ ಸೆಸ್ಸು ಸಹಾ ಕೊಡಬೇಕು. ಗವರ್ನ್‌ಮೆಂಟಿನಿಂದ ಹರಾಜು ಮಂಜೂರಾಗಿ ಬಂದಕೂಡಲೆ ಬಾಕಿ ಮೊಬಲಗನ್ನು ಲೋಕಲ್ ಸೆಸ್ಸಿನಿಕಿ ಸದರಿ ಟೋಲುನೇಟು ಯಾವ ತಾಲ್ಲೂಕಿನಲ್ಲಿ ಇದ್ದವೋ ಆ ತಾಲ್ಲೂಕು ಖಜಾನೆಗೆ 1904ನೆ ಆಗಷ್ಟು ತಾರೀಖು 10ರ ಒಳಗಾಯಿತು ಸಮನಾದ ಎಂಟು ಕಿಸ್ತುಗಳಾಗಿ ಪ್ರತಿ ತಿಂಗಳ 10ನೆ ತಾರೀಖಿಗೆ ಪಾವತಿ ಮಾಡಬೇಕು. ಡಿಪಾಜಿಟ್ಟಿನ ಮೊಬಲಗು 9, 10, ಮತ್ತು 11ನೆ ಕಿಸ್ತುಗಳಿಗೆ ಜಮೆ ಮಾಡಿಕೊಳ್ಳಲ್ಪಡುತ್ತೆ. ದರಖಾಸ್ತುದಾರನು ಮೂವರ್ ಕಿಸ್ತು ಮೊಬಲಗನ್ನು ತಪ್ಪದೆ ಕೊಡುತ್ತಾ ಒರುವುದಕ್ಕೆ ಇಬ್ಬರನ್ನು ಜಾಮೀನು ಕೊಡಬೇಕು. ಮತ್ತು ಹರಾಜು ಮಂಜೂರಿ ಸಂಗತಿ ತಿಳಿದ ತಾರೀಖು ಲಾಗಾಯಿತು ಮೂರು ದಿವಸದ ಒಳಗೆ ಅವಶ್ಯಕವಿರುವ ಕರಾರನ್ನು ಭಾಷಾಕಾಗದದಲ್ಲಿ ಬರದುಕೊಡಬೇಕು. ಶೇವಣಿ ಇಡದೇ ಇದ್ದರೆ ಅಥವಾ ಜಾಮೀನು ಕೊಡದೇ ಇದ್ದರೆ ಡಿಪಾಜಿಟ್ಟು ಮೊಬಲಗು ದೆರಡಪಾಗಿ ಸರಕಾರಕ್ಕೆ ಶೇರಿಸಿಕೊಳ್ಳಲ್ಪಡುತ್ತೆ. ಮತ್ತು ಸದರಿ ಕಂಟ್ರಾಕ್ಟು ಎರಡನೇ ಹರಾಜು ಮಾಡಲ್ಪಡುವುದು. ಹೀಗೆ ಮಾಡಿದ್ದರಲ್ಲಿ ಸರಕಾರಕ್ಕೆ ಲುಕ್ಸಾನು ಸಂಭವಿಸಿದಲ್ಲಿ ಕಂಟ್ರಾಕ್ಟುದಾರನ, ಅಥವಾ ಅವನ ಜಾಮೀನುದಾರರ ಜಿಂದಿಗೆ ಹರಾಜು ಮಾಡಿಸಿ ವಸೂಲು ಮಾಡಿಕೊಳ್ಳಲ್ಪಡುತ್ತೆ.

4. ಪ್ರತಿ ಮಾಹೆಯಲ್ಲಿಯೂ ಕೊಡತಕ್ಕ ಕಿಸ್ತು ಮೊಬಲಗನ್ನು ಗೊತ್ತು ಮಾಡಲ್ಪಟ್ಟ ತಾರೀಖಿನೊಳಗಾಗಿ ಪಾವತಿ ಮಾಡಲು ತಪ್ಪಿದರೆ ವರುಷ ಬಂದಕ್ಕೆ ಶೇಕಡ ಆರು ರೂಪಾಯಿನೇರೆ ಬಡ್ಡಿ ಸೇರಿಸಿ ಕಿಸ್ತು ಮೊಬಲಗು ವಸೂಲ್ ಮಾಡಲ್ಪಡುತ್ತೆ.

5. ಕಂಟ್ರಾಕ್ಟರು ಹರಾಜಿನಲ್ಲಿ ಪಡೆಯುವ ಮೊಬಲಗಿನ ಮೇಲೆ ರೂಪಾಯಿ ಬಂದಕ್ಕೆ ಬಂದಾಣಿಯಂತೆ ಲೋಕಲ್ ಸೆಸ್ಸು ಕೊಡಲಿಕ್ಕೆ ಬದ್ಧನಾಗಿರುತ್ತಾನೆ.

6. ಕಂಟ್ರಾಕ್ಟರಿಂದ ಯಾವ ಜಾಮೀನುದಾರಿಂದ ಬಾಕಿ ಮೊಬಲಗು ಬಾರದೆ ಇದ್ದಲ್ಲಿ ಲ್ಯಾಂಡ್ ರವಿನ್ಯೂ ಬಾಕಿ ವಸೂಲಿಗೆ ಹಾಲಿ ಜಾರಿಯಲ್ಲಿರುವ ನಿಬಂಧನೆಗಳನುಸರಿಸಿ ವಸೂಲ್ ಮಾಡಲ್ಪಡುತ್ತೆ.

7. ಪ್ರತಿ ದಿವಸದ ಟೋಲು ವಸೂಲಿ ತೋರಿಸುವ ಲೆಕ್ಕವನ್ನು ಇಡಲು ಕಂಟ್ರಾಕ್ಟುದಾರನು ಬದ್ಧನಾಗಿರುವದಲ್ಲದೆ ಸದರಿ ಲೆಕ್ಕವು ಡೆಪ್ಯೂಟಿ ಕಮಿಷನರ್, ಅಸಿಸ್ಟೆಂಟ್ ಕಮಿಷನರ್ ಮತ್ತು ಸದರಿ ಟೋಲು ಯಾವ ತಾಲ್ಲೂಕಿಗೆ ಅಥವಾ ಸಬ್ ತಾಲ್ಲೂಕಿನಲ್ಲಿದ್ದೆಯೋ ಆಯಾ ತಾಲ್ಲೂಕು ಅಮಲ್ದಾರ್ ಅಥವಾ ಸಬ್ ತಾಲ್ಲೂಕು ಅಮಲ್ದಾರ್, ಡೆಪ್ಯೂಟಿ ಅಮಲ್ದಾರ್ ತನಿಖೆಗೆ ಒಳಗಾಗಿರತಕ್ಕದ್ದು.

8. ಕಂಟ್ರಾಕ್ಟರು ಇಟ್ಟುಕೊಳ್ಳಲಿಕ್ಕೆ ಮಾಣಿಸಿರುವ ಪೆಡ್ಯೂಲ್‌ನಲ್ಲಿ ಕಂಡ ದರಗಳ ಪ್ರಕಾರವಲ್ಲದೆ ಅನ್ಯಥಾ ಟೋಲು ಸುಂಕವನ್ನು ವಸೂಲು ಮಾಡಕೂಡದು. ಹಾಗೆ ಮಾಡಿದ್ದಾದರೆ ಕಂಟ್ರಾಕ್ಟನ್ನು ರದ್ದು ಮಾಡುವದಲ್ಲದೇ ಕಂಟ್ರಾಕ್ಟುದಾರನನ್ನು ಕ್ರಿಮಿನಲ್ ತಪ್ಪು ಪ್ರಾಸಿಕ್ಯೂಷನ್‌ಗೆ ಗುರಿಪಡಿಸಲಾಗುವುದು.

9. ದಂಡು - ಮಿಲಿಟರಿ ಸಾಮಾನು ಅಥವಾ ಸರಕಾರಿ ಹ್ಯೂಟಿಮೇಲೆ ಪ್ರಯಾಣ ಮಾಡುವ ಪೋಲೀಸು ಯಾ ಇತರ ಉದ್ಯೋಗಸ್ಥರ ಸರ್ಕಾರದ ಸಾಮಾನುಗಳ ಮೇಲೆ ಅಂದರೆ ಸಮ್ಮಂಧಪಟ್ಟ ಅಲಸಿಯಾ ಮೊಟ್ಟೆಸರರ ಸರಟಿಫಿಕೇಟಿನಿಂದ ಬರತಕ್ಕ ಸಾಮಾನುಗಳು ಇವುಗಳ ಮೇಲೆ ಕಂಟ್ರಾಕ್ಟುದಾರನು ಸುಂಕ ವಸೂಲ್ ಮಾಡಕೂಡದು.

10. ಕಂಟ್ರಾಕ್ಟುದಾರನು ಸುಂಕ ವಸೂಲ್ ಮಾಡುವ ಬಂದು ದರವಾರು ಪಟ್ಟಿಯನ್ನು ಇಂಗ್ಲಿಷ್ ಮತ್ತು ಕನ್ನಡದಲ್ಲಿ ಸ್ಪಷ್ಟವಾಗಿ ಒರೆದು ಟೋಲುಗೇಟಿನ ಬಳಿ ಚನ್ನಾಗಿ ಕಾಣುವ ಜಾಗದಲ್ಲಿ ತಗಲುಹಾಕಬೇಕು.

11. ಗವರ್ನ್‌ಮೆಂಟಿನಿಂದ ನೇಮಿಸಲ್ಪಟ್ಟ ಟೋಲಿ ಗೇಟು ಬಳಿಯಲ್ಲಲ್ಲದೆ ಮತ್ತೆಲ್ಲಿಯೂ ಕಂಟ್ರಾಕ್ಟುದಾರನು ಸುಂಕವನ್ನು ವಸೂಲ್ಮಾಡಕೂಡದು.

12. ಇನ್ನು ಜಾಸ್ತಿ ಯಾರೇನಾದರೂ ತಿಳಿಯಬೇಕಾದಲ್ಲಿ ಕಡೂರು ಡಿಸ್ಟ್ರಿಕ್ಟ್ ಡೆಪ್ಯೂಟಿ ಕಮಿಷನರ್ ಸಾಹೇಬರವರಿಗೆ ಬರೆಯುವದರ ಮೂಲಕ ತಿಳಿದುಕೊಳ್ಳಬಹುದು.

ಬಳಿಹೊನ್ನೂರು ಸೇತುವೆ, ಹರಿಹರಪುರದ ಸೇತುವೆಗಳ ಮೇಲೆ ಇರುವ ಟೋಲು ಗೇಟುಗಳ ಬಳಿ ಸುಂಕ ವಸೂಲ್ಮಾಡುವ ದರಗಳ ಪಟ್ಟಿ.

ನಂಬರ್.	ತರಕೀಲು.	ಭರ್ತಿ ಆಗಿದ್ದರೆ.			ಖಾಲಿ ಇದ್ದರೆ.		
		ರೂ.	ಆ.	ಪೈ.	ರೂ.	ಆ.	ಪೈ.
1	ನಾಲ್ಕು ಚಕ್ರದ ಗಾಡಿ 1ಕ್ಕೆ ...	0	8	0	0	8	0
2	ಎಡು ಚಕ್ರದ ಪೆಟ್ಟಿ ಗಾಡಿ ಅಥವಾ ಭಂಡಿ 1ಕ್ಕೆ	0	4	0	0	4	0
3	ಎಮ್ಮೆಗಳು, ಎತ್ತು ... ರಾಸು 1ಕ್ಕೆ ...	0	0	6	0	0	3
4	ಆನೆ 1ಕ್ಕೆ	1	0	0	1	0	0
5	ಒಂಟೆ 1ಕ್ಕೆ	0	8	0	0	8	0
6	ಪ್ರತಿ ಕುದರೆ ಹೊರೆ ಹೊತವಾಗಿದ್ದರೆ ಅಥವಾ ಸವಾರಿ ಮಾಡಲ್ಪಡುತ್ತಿದ್ದರೆ ...	0	1	0			
7	ಡಿಟ್ಟೋ ಹೊರೆ ಇದ್ದು ಅಥವಾ ಹಿಡಿದುಕೊಂಡು ಹೋಗಲ್ಪಡುವದಕ್ಕೆ				0	1	0
8	ಪ್ರತಿ ಕತ್ತೆ ಹೊರೆ ಹೊತವಾಗಿದ್ದರೆ ಅಥವಾ ಸವಾರಿ ಮಾಡಲ್ಪಡುತ್ತಿದ್ದರೆ ...	0	0	6	...		

ನೋಟು.—ನಡೆದುಬರುವ ಪ್ರಯಾಣಿಕರ ಮೇಲೆ ಟೋಲ್ ವಸೂಲ್ ಮಾಡತಕ್ಕದ್ದಿಲ್ಲ.

ಎ. ವೇದಾಂತದೇಸಿಗಂ ಅಯ್ಯಂಗಾರ್,
ಫೋರ್ ಡೆಪ್ಯೂಟಿ ಕಮ್ಮಿಷನರ್.